Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

26.05.2025 18.40 hrs

<><*<><>*><>

ಮುಖ್ಯಾಂಶಗಳು

- ಕೋವಿಡ್ ಪರಿಸ್ಥಿತಿ ಅವಲೋಕಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ -ವೆಂಟಿಲೇಟರ್, ಆಕ್ಸಿಜನ್, ಔಷಧಿ ಸಂಗ್ರಹಿಸಿಟ್ಟುಕೊಳ್ಳುವಂತೆ ಸೂಚನೆ
- ಬೆಂಗಳೂರಿಗೆ ರಕ್ಷಣಾ ಕಾರಿಡಾರ್ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಶೀಘ್ರವೇ ಮನವಿ - ಸಚಿವ ಎಂ.ಬಿ.ಪಾಟೀಲ್
- ದೇಶದಲ್ಲಿಯೇ ಮೊದಲ ಬಾರಿಗೆ ರಾಜ್ಯದಲ್ಲಿ ಶೀಘ್ರ ನ್ಯಾಯದಾನಕ್ಕೆ ದಿಟ್ಟ ಹೆಜ್ಜೆ ಕೈಗೊಂಡ ರಾಜ್ಯ ಸರ್ಕಾರ
- ಮಂಡ್ಯ ರಸ್ತೆ ಅಪಘಾತದಲ್ಲಿ ಮಗು ಸಾವಿನ ಪ್ರಕರಣ - ಮೂವರು ಪೊಲೀಸರು ಅಮಾನತು
- ರಾಜ್ಯದ ವಿವಿಧೆಡೆ ಧಾರಾಕಾರ ಮಳೆ - ದಕ್ಷಿಣ ಕನ್ನಡ ಕೊಡಗಿನಲ್ಲಿ ಜನಜೀವನ ಅಸ್ತವ್ಯಸ್ತ

<><*<><>*><>

ಕೋವಿಡ್ ಸಂಬಂಧಿಸಿದಂತೆ ಪರಿಸ್ಥಿತಿ ಅವಲೋಕಿಸಲು ಆರೋಗ್ಯ ಇಲಾಖೆ ಮತ್ತು ಆರೋಗ್ಯ ಶಿಕ್ಷಣ ಇಲಾಖೆ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾವೇರಿ ನಿವಾಸದಲ್ಲಿ ಇಂದು ಸಭೆ ನಡೆಸಿದರು. ಸಭೆಯಲ್ಲಿ ಅಧಿಕಾರಿಗಳು, ತಜ್ಞರು ಮತ್ತು ಸಚಿವರುಗಳಿಂದ ಮಾಹಿತಿ ಪಡೆದ ಮುಖ್ಯಮಂತ್ರಿಗಳು ಸದ್ಯಕ್ಕೆ ಯಾರು ಆತಂಕ ಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ. ವೆಂಟಿಲೇಟರ್, ಆಕ್ಸಿಜನ್, ಔಷಧ ಸೇರಿ ಇತ್ಯಾದಿ ಅಗತ್ಯಗಳನ್ನು ಸಿದ್ದಪಡಿಸಿಟ್ಟುಕೊಳ್ಳಿ ಎಂದು ಸೂಚಿಸಿದ್ದಾರೆ. *ವಯಸ್ಸಾದವರು, ಗರ್ಭಿಣಿಯರು, ಹೃದಯ ಸಂಬಂಧಿ, ಶ್ವಾಸಕೋಶ ಸಮಸ್ಯೆ ಇರುವವರು ಮುನ್ನೆಚ್ಚರಿಕೆ ಕ್ರಮವಾಗಿ ಮಾಸ್ಕ್ ಧರಿಸುವ ಬಗ್ಗೆ ಅರಿವು ಮೂಡಿಸಬೇಕು ಎಂದು ತಿಳಿಸಿದ್ದಾರೆ. ಶೀತ, ನೆಗಡಿ, ಜ್ವರ ಇರುವ ಮಕ್ಕಳನ್ನು ಪೋಷಕರು ಶಾಲೆಗೆ ಕಳುಹಿಸಬಾರದು. ಶಾಲೆಗಳೂ ಈ ಬಗ್ಗೆ ಗಮನ ಹರಿಸಿ ಶೀತ, ನೆಗಡಿ ಇರುವ ಮಕ್ಕಳನ್ನು ಪೋಷಕರ ಮೂಲಕ ಮನೆಗೆ ಕಳುಹಿಸಬೇಕು ಎಂದು ಸಲಹೆ ನೀಡಿದ್ದಾರೆ. ಎಂತಹುದೇ ಪರಿಸ್ಥಿತಿ ಎದುರಿಸಲು ಸರ್ವ ಸನ್ನದ್ಧವಾಗಿರುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><*<><>*><>

ಬೆಂಗಳೂರಿನ ಹೆಚ್‌ಎಎಲ್ ಸ್ಥಳಾಂತರ ವಿಚಾರ ಸ್ವೀಕಾರಾರ್ಹವಲ್ಲ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತಾನಾಡಿದ ಅವರು ಆಂಧ್ರಪ್ರದೇಶದಲ್ಲಿ ಹೆಚ್ ಎ ಎಲ್ ಘಟಕ ಸ್ಥಾಪಿಸುವುದರಲ್ಲಿ ಯಾವುದೇ ತಪ್ಪಿಲ್ಲ ಎಂದು ಹೇಳಿದ್ದಾರೆ. ಶೀಘ್ರವೇ ರಾಜ್ಯಕ್ಕೆ ಅರ್ಹ ರಕ್ಷಣಾ ಕಾರಿಡಾರ್ ನೀಡುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲು ನವದೆಹಲಿಗೆ ತೆರಳುವುದಾಗಿ ಸ್ಪಷ್ಟಪಡಿಸಿದ್ದಾರೆ. ದೇಶದ ರಕ್ಷಣಾ ಉತ್ಪಾದನೆಗೆ ಶೇಕಡಾ ೬೫ ರಷ್ಟು ಕೊಡುಗೆ ನೀಡುವ ಹಾಗೂ ಈ ವಲಯದಲ್ಲಿ ಜಾಗತಿಕವಾಗಿ ಮೂರನೇ ಸ್ಥಾನದಲ್ಲಿರುವ ರಾಜ್ಯಕ್ಕೆ ಇದೇ ರೀತಿಯ ಕಾರಿಡಾರ್ ಘೋಷಿಸದಿರುವುದು ಅನ್ಯಾಯ" ಎಂದು

ಸಚಿವ ಪಾಟೀಲ್ ಹೇಳಿದ್ದಾರೆ. ಇದೇ ವೇಳೆ ನಟಿ ತಮ್ಮನ್ನಾ ಭಾಟಿಯಾ ಅವರನ್ನು ಮೈಸೂರು ಸ್ಯಾಂಡಲ್ ಸಾಬೂನಿನ ಪ್ರಚಾರ ರಾಯಭಾರಿಯಾಗಿ ನೇಮಿಸಿಕೊಂಡಿರುವ ಹಿಂದೆ ವಾಣಿಜ್ಯ ಉದ್ದೇಶವಿದೆ ಎಂದು ಸಮರ್ಥಿಸಿ ಕೊಂಡಿದ್ದಾರೆ.

<><*<><>*><>

ದೇಶದಲ್ಲಿಯೇ ಮೊದಲ ಬಾರಿಗೆ ಕರ್ನಾಟಕದಲ್ಲಿ ಶೀಘ್ರ ನ್ಯಾಯದಾನಕ್ಕೆ ದಿಟ್ಟ ಹೆಜ್ಜೆ ಕೈಗೊಳ್ಳಲಾಗಿದೆ ಎಂದು  ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್. ಕೆ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು  ಶಾಸಕಾಂಗ ಮಾಡಿದ ಈ ತಿದ್ದುಪಡಿಯ ಮುಖಾಂತರ ಪ್ರತಿಯೊಂದು ಸಿವಿಲ್ ಪ್ರಕರಣಗಳು ರಾಜಿ ಸಂಧಾನದ ಮೂಲಕ ಬಗೆಹರಿಸಲು ಕಡ್ಡಾಯವಾದ ಪ್ರಯತ್ನ ಮಾಡಬೇಕು. ಎರಡು ತಿಂಗಳೊಳಗಾಗಿ ರಾಜಿ ಸಂಧಾನದ ಪ್ರಯತ್ನ ತಾರ್ಕಿಕ ಅಂತ್ಯ ಕಾಣಬೇಕು ಎಂದು ಹೇಳಿದ್ದಾರೆ. ಬಡ ಕಕ್ಷಿದಾರರಿಗೆ ಶೀಘ್ರ ನ್ಯಾಯ ದೊರಕಿಸಲು ಸಿಪಿಸಿ ಕಾನೂನಿನಲ್ಲಿ ಮಹತ್ವದ ಬದಲಾವಣೆ ತರಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಬಿಜೆಪಿ ವಿರುದ್ಧ ಮಾನನಷ್ಟ ಮೊಕದ್ದಮೆ ಪ್ರಕರಣ ದಾಖಲಿಸಿದ್ದನ್ನು ಅವರು ಸಮರ್ಥಿಸಿಕೊಂಡಿದ್ದಾರೆ.

<><*<><>*><>

ಫೆಡರೇಷನ್ ಆಫ್ ವೈನ್ ಮರ್ಚೆಂಟ್ಸ್ ಅಸೋಸಿಯೇಷನ್ ನಿಯೋಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಇಂದು ಭೇಟಿ ಮಾಡಿ ತಮ್ಮ ಬೇಡಿಕೆಗಳ ಬಗ್ಗೆ ಚರ್ಚಿಸಿದರು. ಪರವಾನಗಿ  ಶುಲ್ಕ , ಮೊಲಾಸಸ್ ಮೇಲಿನ ಶುಲ್ಕ ಕಡಿಮೆ ಮಾಡುವಂತೆ  ಹಾಗೂ ಇನ್ನಿತರ ಬೇಡಿಕೆಗಳ ಈಡೇರಿಕೆಗೆ ಮನವಿ ಸಲ್ಲಿಸಿದರು. ನಿಯೋಗದ ಬೇಡಿಕೆಗಳನ್ನು  ಅಬಕಾರಿ ಹಾಗೂ ಆರ್ಥಿಕ ಇಲಾಖೆಯೊಂದಿಗೆ ಚರ್ಚಿಸಿ ಪರಿಶೀಲಿಸುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

<><*<><>*><>

ರಾಯಚೂರಿನ ಕೃಷಿ ವಿಜ್ಞಾನ ವಿಶ್ವವಿದ್ಯಾಲಯವು ಕರ್ನಾಟಕದಲ್ಲಿ ಕೃಷಿ ಮತ್ತು ಕೃಷಿ ಎಂಜಿನಿಯರಿಂಗ್‌ನಲ್ಲಿ ಸಂಶೋಧನೆ ಮಾಡುವಲ್ಲಿ ಮುಂಚೂಣಿಯಲ್ಲಿದೆ ಎಂದು  ಭಾರತೀಯ ವಿಶ್ವವಿದ್ಯಾಲಯಗಳ ಸಂಘದ ಮಹಾಕಾರ್ಯದರ್ಶಿ ಡಾ.ಪಂಕಜ್ ಮಿತ್ತಲ್ ತಿಳಿಸಿದ್ದಾರೆ. ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ  ೧೪ನೇ ಘಟಿಕೋತ್ಸವದಲ್ಲಿ ಇಂದು ಮಾತಾನಾಡಿದ ಅವರು,  ಈ ವಿಶ್ವವಿದ್ಯಾನಿಲಯವು ತೊಗರಿ ಪ್ರಭೇದಗಳಾದ ನ್ಯಾಮ್-೮೮, ಜಿಆರ್‌ಜಿ-೮೧೧, ಜಿಆರ್‌ಜಿ-೧೫೨ ಮತ್ತು ಟಿಎಸ್ ೩ಆರ್ ಅನ್ನು ಅಭಿವೃದ್ಧಿಪಡಿಸುವಲ್ಲಿ ಪ್ರಾಯೋಗಿಕ ಪ್ರಯತ್ನ ಮಾಡಿದೆ ಎಂದು ಸಂತಸ ವ್ಯಕ್ತ ಪಡಿಸಿದ್ದಾರೆ.  ಗುಲ್ಬರ್ಗಾ ತೊಗರಿ ಬೇಳೆಗೆ ಭಾರತ ಸರ್ಕಾರದಿಂದ ಜಿಐ ಮೂಲಕ ವಿಶೇಷ ಸ್ಥಾನಮಾನ ಪಡೆಯಲು ವಿಶ್ವವಿದ್ಯಾಲಯವು ಶ್ಲಾಘನೀಯ ಕೊಡುಗೆ ನೀಡಿದೆ ಎಂದು ಹೇಳಿದ್ದಾರೆ.  ವಿಶ್ವವಿದ್ಯಾನಿಲಯವು ಗಂಗಾವತಿ ಸೋನಾ ಮತ್ತು ಜಿವಿಕೆ ೧೦೮೯ ಎಂಬ ಭರವಸೆಯ ಭತ್ತದ ಪ್ರಭೇದಗಳನ್ನು ಅಭಿವೃದ್ಧಿಪಡಿಸಿದೆ.

<><*<><>*><>

ಹೆಲ್ಮೆಟ್ ಪರಿಶೀಲನೆ ವೇಳೆ ಚಲಿಸುತ್ತಿದ್ದ ಬೈಕ್ ಗೆ ಪೊಲೀಸರು ಅಡ್ಡ ಬಂದ ಪರಿಣಾಮ ಬೈಕ್ ನಿಂದ ಕೆಳಗೆ ಬಿದ್ದು ಮೂರು ವರ್ಷದ ಮಗು ದಾರುಣವಾಗಿ ಸಾವನ್ನಪ್ಪಿರುವ ಘಟನೆ ಮಂಡ್ಯ ನಗರದ ಸ್ವರ್ಣಸಂದ್ರ ಬಳಿ ಸಂಭವಿಸಿದೆ. ಘಟನೆಯಲ್ಲಿ ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ

ಗೊರುವನಹಳ್ಳಿ ಗ್ರಾಮದ ರಿತೀಕ್ಷಾ ಸಾವನ್ನಪ್ಪಿದ್ದಾರೆ. ಪೊಲೀಸರ ವಿರುದ್ಧ ಮಂಡ್ಯ ನಗರದ ಮಿಮ್ಸ್ ಆಸ್ಪತ್ರೆ ಬಳಿ ಮೃತ ಮಗುವಿನ ಸಂಬಂಧಿಕರು ಹಾಗೂ ಸಾರ್ವಜನಿಕರು ಪ್ರತಿಭಟನೆ ನಡೆಸಿದರು. ಬಳಿಕ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಘಟನಾ ಸ್ಥಳಕ್ಕೆ ಭೇಟಿ ನೀಡಿ, ಮೃತರ ಕುಟುಂಬಕ್ಕೆ ಸಾಂತ್ವಾನ ಹೇಳಿದರು. ಮಗು ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮಂಡ್ಯ ಸಂಚಾರಿ ಠಾಣೆಯ ಮೂವರು ಂSI ಗಳನ್ನು ಅಮಾನತು ಮಾಡಲಾಗಿದೆ.

<><*<><>*><>

‘ಸ್ವಚ್ಛ ವಾಹಿನಿ ಗ್ರಾಮೀಣ ನೈರ್ಮಲ್ಯದ ಯೋಜನೆಯಡಿ ಗ್ರಾಮ ಪಂಚಾಯಿತಿಗಳಲ್ಲಿ ಪ್ರತ್ಯೇಕ ಅಧಿಕಾರಿಯನ್ನು ನೇಮಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸ್ವಚ್ಛ ವಾಹಿನಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳೆಯರ ಸಮಸ್ಯೆಗಳು, ಅವರ ಬೇಡಿಕೆಗಳು ಮತ್ತು ಕೈಗೊಳ್ಳಬಹುದಾದ ಪರಿಹಾರ ಕ್ರಮಗಳ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವರು ಗ್ರಾಮೀಣ ಪರಿಸರವನ್ನು ಶುಚಿಯಾಗಿರಿಸಿಕೊಳ್ಳಬೇಕೆಂದು ನಿರ್ದೇಶನ ನೀಡಿದ್ದಾರೆ. ರಾಜ್ಯದಲ್ಲಿ ೩ ಸಾವಿರದ ೪೮೬ ಮಹಿಳಾ ಚಾಲಕಿಯರು ತ್ಯಾಜ್ಯ ನಿರ್ವಹಣೆಯಲ್ಲಿ ನಿರತರಾಗಿದ್ದಾರೆ ಎಂದೂ ಸಚಿವರು ತಿಳಿಸಿದ್ದಾರೆ.

<><*<><>*><>

ಕಾಂಗ್ರೆಸ್ ನಾಯಕರು ಮಾನನಷ್ಟ ಮೊಕದ್ದಮೆ ನಾಟಕವನ್ನು ಬಿಟ್ಟು ಬಿಡಬೇಕು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತಾನಾಡಿದ ಅವರು, ಮಾನನಷ್ಟ ಮೊಕದ್ದಮೆ ಹೂಡಲು ಸರಕಾರಕ್ಕೆ ಯಾವುದೇ ನೈತಿಕತೆ ಇಲ್ಲ ಎಂದು ತಿಳಿಸಿದ್ದಾರೆ. ಯಾವುದೇ ಸಾಧನೆ ಮಾಡದೆ ಸರ್ಕಾರ ಎರಡು ವರ್ಷ ಕಳೆದಿದೆ ಎಂದು ದೂರಿದ್ದಾರೆ. ಸರಕಾರಿ ಆಸ್ಪತ್ರೆಗಳಲ್ಲಿ ಜನೌಷಧಿ ಕೇಂದ್ರಗಳನ್ನು ಮುಚ್ಚಿದ್ದೇಕೆ? ಎಂದು ಪ್ರಶ್ನಿಸಿದ್ದಾರೆ.

<><*<><>*><>

ರಾಜ್ಯದೆಲ್ಲೆಡೆ ಧಾರಾಕಾರ ಮಳೆಯಾಗುತ್ತಿದ್ದು ಜನಜೀವನ ಅಸ್ತವ್ಯಸ್ತವಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುಂಗಾರು ಬಿರುಸುಗೊಂಡಿದೆ. ವ್ಯಾಪಕ ಮಳೆಯಾಗುತ್ತಿರುವುದರಿಂದ ವಿಪತ್ತು ನಿರ್ವಹಣೆಗೆ ರಾಷ್ಟ್ರೀಯ ಮತ್ತು ರಾಜ್ಯ ವಿಪತ್ತು ನಿರ್ವಹಣಾ ದಳಗಳು ಜಿಲ್ಲೆಯಲ್ಲಿ ಬೀಡುಬಿಟ್ಟಿದ್ದು, ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಂಡಿದೆ. ಜಿಲ್ಲೆಯಲ್ಲಿ ಇನ್ನೂ ನಾಲ್ಕು ದಿನ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಕೊಡಗು ಜಿಲ್ಲೆಯಾದ್ಯಂತ ನಿರಂತರವಾಗಿ ಧಾರಾಕಾರ ಮಳೆಯಾಗುತ್ತಿದ್ದು ಮಡಿಕೇರಿ ತಲಕಾವೇರಿ ಭಾಗಮಂಡಲ ಸೇರಿದಂತೆ ಜಿಲ್ಲೆಯ ಪ್ರಮುಖ ಪಟ್ಟಣಗಳಲ್ಲಿ ಸಾಮಾನ್ಯ ಜನಜೀವನ ವ್ಯತ್ಯಯವಾಗಿದೆ. ಕೊಡಗಿನಲ್ಲಿ ಮರಳು ಮತ್ತು ಮರದ ದಿಮ್ಮಿಗಳ ಸಾಗಾಣಿಕೆಯನ್ನು ಜುಲೈ ೫ರ ವರೆಗೆ ನಿಷೇಧಿಸಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲೂ ಮಳೆಯಾಗುತಿದ್ದು ಚಿಕ್ಕಮಗಳೂರು ನಗರ, ಮೂಡಿಗೆರೆ, ಕೊಟ್ಟಿಗೆಹಾರ, ಕಳಸ ಸೇರಿ ಹಲವೆಡೆ ರಸ್ತೆಗಳ ಮೇಲೆ ನೀರು ಹರಿಯುತ್ತಿದೆ. ಉಡುಪಿ ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಣೆಯಾಗಿರುವ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಜಿಲ್ಲಾಡಳಿತಕ್ಕೆ ಸೂಚನೆ ನೀಡಿದ್ದಾರೆ.

<><*<><>*><>

ರಾಜ್ಯದ ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ನೈರುತ್ಯ ಮಾನ್ಸೂನ್ ತೀವ್ರವಾಗಿತ್ತು ಭಾಗಮಂಡಲದಲ್ಲಿ ೨೩ ಸೆಂ.ಮೀ. ಕೊಟ್ಟಿಗೆ ಹಾರ ೨೨ಸೆಂ.ಮೀ. ಪುತ್ತೂರಿನಲ್ಲಿ ೧೭ ಸೆಂ.ಮೀ. ಮಳೆಯಾಗಿದೆ.  ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಧಾರಾಕಾರ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿದ್ದು ಹಗುರದಿಂದ ಸಾಧಾರಣ ಮಳೆಯಾಗಲಿದೆ.

**<><*<><>*><>**

ಕಲ್ಯಾಣ ಕರ್ನಾಟಕ ಭಾಗದ ರೈತರ ಅವಶ್ಯಕತೆಗೆ ಅನುಗುಣವಾಗಿ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ಪೂರೈಕೆ ಮಾಡಬೇಕು ಎಂದು ರಾಯಚೂರು ಕೃಷಿ ಇಲಾಖೆಯ ಆಯುಕ್ತ ವೈ.ಎಸ್.ಪಾಟೀಲ್ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ೭.೩೫ ಕ್ಕೆ <>*><>**